# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಐಐಎಂ, ಐಐಟಿ, ಐಐಎಸ್‌ಸಿ ಮುಂತಾದ ಪ್ರತಿಷ್ಠಿತ ರಾಷ್ಟ್ರೀಯ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಪ್ರವೇಶ ಪಡೆಯುವ ಅಲ್ಪಸಂಖ್ಯಾತ ವರ್ಗಗಳ ಸಮುದಾಯದ ವಿದ್ಯಾರ್ಥಿಗಳಿಗೆ ಒಂದು ಬಾರಿ ತಲಾ 2 ಲಕ್ಷ ರೂ.ಗಳ ಪ್ರೋತ್ಸಾಹಧನ ನೀಡುವ ಬಗ್ಗೆ.

**ಓದಲಾಗಿದೆ:** 1. ಮಾನ್ಯ ಮುಖ್ಯ ಮಂತ್ರಿಯವರ 2017-18ನೇ ಸಾಲಿನ ಆಯವ್ಯಯ ಭಾಷಣ, ಕಂಡಿಕೆ-219.

2. ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ, ಬೆಂಗಳೂರು ಇವರ ಏಕಕಡತದ ಪ್ರಸ್ತಾವನೆ ಸಂಖ್ಯೆ: ಅಸಂನಿ/ಐಐಎಂ ಐಐಟಿ ಐಐಎಸ್‌ಸಿ/ ಸಿಆರ್-181/2016-17 ದಿನಾಂಕ: 05.05.2017.

*~*~*~*

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರಲ್ಲಿ 2017-18ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಮಾನ್ಯ ಮುಖ್ಯಮಂತ್ರಿಗಳು **ಕಂಡಿಕೆ-219ರಲ್ಲಿ** IIM, IIT, IISC ಮುಂತಾದ ಪ್ರತಿಷ್ಠಿತ ರಾಷ್ಟ್ರೀಯ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಪ್ರವೇಶ ಪಡೆಯುವ ಅಲ್ಪಸಂಖ್ಯಾತ ವರ್ಗಗಳ ಸಮುದಾಯದ ವಿದ್ಯಾರ್ಥಿಗಳಿಗೆ ಒಂದು ಬಾರಿ ತಲಾ 2 ಲಕ್ಷ ರೂ.ಗಳ ಪ್ರೋತ್ಸಾಹಧನ ನೀಡಲಾಗುವುದೆಂದು ಘೋಷಿಸಿರುತ್ತಾರೆ.

ಅಲ್ಪಸಂಖ್ಯಾತರ ಕಲ್ಯಾಣ ಇಲಾಖಾ ವತಿಯಿಂದ ಅಲ್ಪಸಂಖ್ಯಾತ ಸಮುದಾಯದ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಮತ್ತು ಶುಲ್ಕ ಮರುಪಾವತಿ ಯೋಜನೆಯಡಿ ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ, ಮೆಟ್ರಿಕ್ ನಂತರ ವಿದ್ಯಾರ್ಥಿವೇತನ, ಮೆರಿಟ್-ಕಮ್-ಮೀನ್ಸ್ ವಿದ್ಯಾರ್ಥಿವೇತನ, ವಿದೇಶದಲ್ಲಿ ಉನ್ನತ ಶಿಕ್ಷಣ ಪಡೆಯುತ್ತಿರುವ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ, ಶುಲ್ಕ ಮರುಪಾವತಿ ಹಾಗೂ ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ವಿದ್ಯಾಸಿರಿ ಯೋಜನೆಯಡಿ ವಿದ್ಯಾಭ್ಯಾಸವನ್ನು ಮುಂದುವರೆಸುವ ದಿಶೆಯಲ್ಲಿ ಪ್ರೋತ್ಸಾಹ ನೀಡಲು ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.

ಈ ಕೆಳಕಂಡ ಪ್ರತಿಷ್ಠಿತ ರಾಷ್ಟ್ರೀಯ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ IIM, IIT, IISC ಮುಂತಾದ ಕೋರ್ಸ್‌ಗಳಲ್ಲಿ ಪ್ರವೇಶ ಪಡೆದಿರುವ ಅಲ್ಪಸಂಖ್ಯಾತರ ಸಮುದಾಯದ ವಿದ್ಯಾರ್ಥಿಗಳಿಗೆ ಒಂದು ಬಾರಿ ಮಾತ್ರ (ಮೊದಲನೇ ವರ್ಷದಿಂದ ಅಂತಿಮ ವರ್ಷದವರೆಗೆ) ತಲಾ **ರೂ.2.00ಲಕ್ಷಗಳ** ಪ್ರೋತ್ಸಾಹಧನ ನೀಡಲು ಉದ್ದೇಶಿಸಿ ಮಂಜೂರಾತಿ ನೀಡುವಂತೆ ಕೋರಿ ಮೇಲೆ ಓದಲಾದ ಕ್ರಮ ಸಂಖ್ಯೆ (2)ರಲ್ಲಿ ನಿರ್ದೇಶಕರು, ಅಲ್ಪಸಂಖ್ಯಾತರ ಕಲ್ಯಾಣ ನಿರ್ದೇಶನಾಲಯ ಇವರು ಏಕಕಡತ ಪದ್ಧತಿಯನ್ವಯ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

1) Indian Institutes of Technology (IITs).
2) Indian Institute of Information Technology, (IIITs).
3) National Institutes of Technology (NITs).

....2